## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ಎ. ಕೃಷ್ಣಪ್ಪ, ನಿವೃತ್ತ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು ಹಾಗೂ ವಿಚಾರಣಾಧಿಕಾರಿಗಳು, ಬೆಂಗಳೂರು – ಸಂಭಾವನೆ ನೀಡುವ ಬಗ್ಗೆ.

ಓದಲಾಗಿದೆ:-

1. ಸರ್ಕಾರದ ಆದೇಶ ಸಂಖ್ಯೆ : ಸಿಆಸುಇ 6 ಸೇಸವಿ 2010, ದಿನಾಂಕ: 28-04-2011.
2. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 19 ಇಎನ್‌ಕ್ಯೂ 2003, ದಿನಾಂಕ: 27-06-2012.
3. ವಿಚಾರಣಾಧಿಕಾರಿಯವರ ವರದಿಯ ದಿನಾಂಕ: 24-01-2013

ಪ್ರಸ್ತಾವನೆ:

ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರಡಿಯಲ್ಲಿ ಮಾಡುವ ಇಲಾಖಾ ವಿಚಾರಣೆಯಲ್ಲಿ ವಿಚಾರಣಾಧಿಕಾರಿಯಾಗಿ ನೇಮಕವಾಗುವ ನಿವೃತ್ತ ಜಿಲ್ಲಾ ನ್ಯಾಯಾಧೀಶರಿಗೆ ಪ್ರತಿ ವಿಚಾರಣೆಗೆ ವಾಹನ ಭತ್ಯೆಯೂ ಸೇರಿದಂತೆ ಒಟ್ಟು ರೂ. 15,000/- (ಹದಿನೈದು ಸಾವಿರ ರೂಪಾಯಿಗಳು) ಸಂಭಾವನೆಯನ್ನು ಪಾವತಿಸಲು ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ: 28-04-2011ರ ಸರ್ಕಾರದ ಆದೇಶದಲ್ಲಿ ತಿಳಿಸಲಾಗಿದೆ.

ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ-ವಿಭಾಗ, ಅರಕಲಗೂಡು ಇಲ್ಲಿ ನೀರು ಸರಬರಾಜು ಯೋಜನೆಗೆ ಸಂಬಂಧಿಸಿದ 200 ಎಂಎಂ ಪಿವಿಸಿ ಪೈಪುಗಳ ಖರೀದಿ ಮತ್ತು ಮಾರಾಟದಲ್ಲಿ ಸರ್ಕಾರಕ್ಕೆ ರೂ. 5,53,873/-ಗಳ ಮೊತ್ತದ ಆರ್ಥಿಕ ನಷ್ಟವುಂಟಾಗಲು ಕಾರಣರಾಗಿರುವ ಶ್ರೀ ಬಿ.ಕೆ.ಸುರೇಶ ಬಾಬು, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಶ್ರೀ ಎ.ಕೃಷ್ಣಪ್ಪ, ನಿವೃತ್ತ ಜಿಲ್ಲಾ ನ್ಯಾಯಾಧೀಶರನ್ನು ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ದಿನಾಂಕ: 27-06-2012ರ ಆದೇಶದಲ್ಲಿ ವಿಚಾರಣಾಧಿಕಾರಿಯನ್ನಾಗಿ ನೇಮಿಸಲಾಗಿದೆ.

ವಿಚಾರಣಾಧಿಕಾರಿಗಳು ಇಲಾಖಾ ವಿಚಾರಣೆ ಜರುಗಿಸಿ, ಮೇಲೆ ಕ್ರಮ ಸಂಖ್ಯೆ (3)ರಲ್ಲಿ ಓದಲಾದ ದಿನಾಂಕ: 24-01-2013ರಂದು ವಿಚಾರಣಾ ವರದಿ ಸಲ್ಲಿಸಿರುತ್ತಾರೆ. ಆದುದರಿಂದ, ವಿಚಾರಣಾಧಿಕಾರಿಗೆ ಸಂಭಾವನೆ ಮಂಜೂರು ಮಾಡಲು ಈ ಮುಂದಿನಂತೆ ಆದೇಶಿಸಿದೆ.

### ಆದೇಶ ಸಂಖ್ಯೆ ಗ್ರಾಅಪ 19 ಇಎನ್‌ಕ್ಯೂ 2003, ಬೆಂಗಳೂರು, ದಿನಾಂಕ: 07-03-2013.

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ ಶ್ರೀ ಎ. ಕೃಷ್ಣಪ್ಪ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಇವರು ಸರ್ಕಾರದ ಆದೇಶದಂತೆ ಇಲಾಖಾ ವಿಚಾರಣೆ ಜರುಗಿಸಿ ವರದಿ ಸಲ್ಲಿಸಿರುತ್ತಾರೆ. ವಿಚಾರಣಾಧಿಕಾರಿಗಳಿಗೆ ನಿಗದಿಪಡಿಸಿರುವ ವಾಹನ ಭತ್ಯೆಯೂ ಸೇರಿದಂತೆ ಒಟ್ಟು

- 2

ರೂ. 15,000/- (ಹದಿನೈದು ಸಾವಿರ ರೂಪಾಯಿಗಳು)ಗಳ ಸಂಭಾವನೆಯನ್ನು ಪಾವತಿಸಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಹಾಸನ ಇವರಿಗೆ ಮಂಜೂರಾತಿ ನೀಡಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಹೆಚ್.ಸಿ.ರಾಜಪ್ಪ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

2/3.3.13

ಪ್ರತಿ;

1. ಮಹಾಲೇಖಪಾಲರು, (ಎ ಮತ್ತು ಇ) ಕರ್ನಾಟಕ, ಬೆಂಗಳೂರು.
2. ಸರ್ಕಾರಕ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ, ವಿಕಾಸಸೌಧ, ಬೆಂಗಳೂರು.
3. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಶೇಷಾದ್ರಿಪುರಂ, ಬೆಂಗಳೂರು.
4. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡ (ದ), ಬೆಂಗಳೂರು
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಹಾಸನ.
6. ಶ್ರೀ ಎ.ಕೃಷ್ಣಪ್ಪ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, #. 1242, 8ನೇ ಕ್ರಸ್, ಚಂದ್ರಾಲೇಔಟ್, ಬೆಂಗಳೂರು - 560040
7. ಮಾನ್ಯ ಉಪ ಮುಖ್ಯಮಂತ್ರಿಯವರ ಹಾಗೂ ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
8. ಗ್ರಾ.ಅ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ (ಪಂ.ರಾಜ್) / ಅಪರ ಕಾರ್ಯದರ್ಶಿ ಇವರ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರು.
9. ಹೆಚ್ಚುವರಿ ಪ್ರತಿ: ರಕ್ಷಾ ಕಡತ: ಮಾಹಿತಿ ಕೇಂದ್ರ.